# ಕರ್ನಾಟಕ ಸರ್ಕಾರ

ಸಂಖ್ಯೆ: ಲಾ-ಕೆಎಲ್ಎಮ್ /108/2023

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:09.01.2024

**ಇವರಿಂದ**:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ,
ವಿಧಾನ ಸೌಧ, ಬೆಂಗಳೂರು-560001.

**ಇವರಿಗೆ:**
ಕುಲಸಚಿವರು,
ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ,
ನವನಗರ, ಹುಬ್ಬಳ್ಳಿ-580025.

**ಮಾನ್ಯರೇ**

**ವಿಷಯ:** 2022-23ನೇ ಸಾಲಿನಿಂದ ವೈದೇಹಿ ಇನ್‌ಸ್ಟಿಟ್ಯೂಟ್ ಆಫ್ ಲಾ, ಬೆಂಗಳೂರು ಈ ಹೊಸ ಕಾನೂನು ಮಹಾವಿದ್ಯಾಲಯವನ್ನು ಕೋರ್ಸುಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಅನುಮೋದನೆ ನೀಡುವ ಕುರಿತು.

**ಉಲ್ಲೇಖ:** ಪತ್ರ ಸಂಖ್ಯೆ: ಕರಾಕಾವಿ/ಕಾಅಮ/ಸಂ/2023-24/1849/I, ದಿನಾಂಕ:27.10.2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ (ತಿದ್ದುಪಡಿ) ಅಧಿನಿಯಮ, 2016ರ ಕಲಂ 58ನೇ ಪ್ರಕರಣದ (5)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ವೈದೇಹಿ ಇನ್‌ಸ್ಟಿಟ್ಯೂಟ್ ಆಫ್ ಲಾ, ಬೆಂಗಳೂರು ಈ ಹೊಸ ಕಾನೂನು ಮಹಾವಿದ್ಯಾಲಯವನ್ನು ಈ ಕೆಳಕಂಡ ಕೋರ್ಸುಗಳೊಂದಿಗೆ (60 ವಿದ್ಯಾರ್ಥಿಗಳನ್ನೊಳಗೊಂಡ 1 ವಿಭಾಗಕ್ಕೆ) ಹೊಸದಾಗಿ ಪ್ರಾರಂಭಿಸಲು ಈ ಕೆಳಗೆ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

| ಕ್ರ.ಸಂ. | ಕೋರ್ಸು ಹೆಸರು | ವಿದ್ಯಾರ್ಥಿಗಳ ಸಂಖ್ಯೆ |
|---|---|---|
| 1 | 3 ವರ್ಷದ ಎಲ್ಎಲ್.ಬಿ. , (ಹೊಸ ಕೋರ್ಸ್) | 60 |
| 2 | 5 ವರ್ಷದ ಬಿ.ಎ. ಎಲ್.ಎಲ್.ಬಿ., (ಹೊಸ ಕೋರ್ಸ್) | 60 |
| 3 | 5 ವರ್ಷದ ಬಿ.ಬಿ.ಎ. ಎಲ್ಎಲ್.ಬಿ., (ಹೊಸ ಕೋರ್ಸ್) | 60 |
| 4 | 5 ವರ್ಷದ ಬಿ.ಕಾಂ. ಎಲ್ಎಲ್.ಬಿ., (ಹೊಸ ಕೋರ್ಸ್) | 60 |

..2

**ಷರತ್ತುಗಳು:-**

1. ಯಾವುದೇ ರೂಪದ ಕ್ಯಾಪಿಟೇಷನ್ ಶುಲ್ಕವನ್ನು ಪಡೆಯತಕ್ಕದ್ದಲ್ಲ.
2. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಸದರಿ ಕಾಲೇಜಿಗೆ ಮೇಲೆ ನಮೂದಿಸಿರುವ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸು ಎಂದು ಪರಿಗಣಿಸತಕ್ಕದ್ದು.
3. ಮೇಲ್ಕಂಡ ಕಾಲೇಜು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ, ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಹಾಗೂ ಸರ್ಕಾರದ ನಿಯಮಾವಳಿಗಳ ಉಪಬಂಧಗಳನ್ನು ಕಾಲಕಾಲಕ್ಕೆ ತಪ್ಪದೇ ಪಾಲಿಸತಕ್ಕದ್ದು.
4. ವಿದ್ಯಾರ್ಥಿಗಳ ಪ್ರವೇಶಾತಿಯು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಮತ್ತು ಬಾರ್ ಕೌನ್ಸಿಲ್ ಆಫ್ ಇಂಡಿಯಾದ ನಿಯಮಗಳಿಗನುಗುಣವಾಗಿರತಕ್ಕದ್ದು.
5. ಕಾಲೇಜಿನ ಪ್ರಾಂಶುಪಾಲರು ಹಾಗೂ ಬೋಧಕ ಸಿಬ್ಬಂದಿಗಳು ಕಾನೂನು ವಿಷಯದಲ್ಲಿ ಬಾರ್ ಕೌನ್ಸಿಲ್ ಆಫ್ ಇಂಡಿಯಾದವರು ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರತಕ್ಕದ್ದು. ಬಾರ್ ಕೌನ್ಸಿಲ್ ಆಫ್ ಇಂಡಿಯಾದ ನಿಯಮಗಳ ನಿಯಮ 14 (1), (2) and (3) (Rules of Legal Edcucation, Chapter III of Part IV) ರನ್ವಯ ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಪೂರ್ವಾನುಮತಿ ಪಡೆಯದೇ ವಿದ್ಯಾರ್ಥಿಗಳ ಪ್ರವೇಶಾತಿ ಮಾಡತಕ್ಕದ್ದಲ್ಲ ಹಾಗೂ ಕಾನೂನು ಶಿಕ್ಷಣವನ್ನು ನೀಡತಕ್ಕದ್ದಲ್ಲ.
6. ವಿದ್ಯಾರ್ಥಿಗಳ ಪ್ರವೇಶಾತಿಗೆ ಮೊದಲು, ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಅನುಮತಿ ಪತ್ರದ ಪ್ರತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಮತ್ತು ಕುಲಸಚಿವರು, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿ ಇವರಿಗೆ ಕಳುಹಿಸತಕ್ಕದ್ದು. ಯಾವುದೇ ರೀತಿಯ ವಿಚಲನವನ್ನು ಗಂಭೀರವಾಗಿ ಪರಿಗಣಿಸಲಾಗುವುದು ಮತ್ತು ಕಾಲೇಜಿಗೆ ನೀಡಿರುವ ಅನುಮತಿಯನ್ನು ಏಕಪಕ್ಷೀಯವಾಗಿ ರದ್ದುಗೊಳಿಸಲು ಸರ್ಕಾರವು ಹಕ್ಕನ್ನು ಉಳಿಸಿಕೊಂಡಿರುತ್ತದೆ.
7. ಕಾಲೇಜಿನ ವಿದ್ಯಾರ್ಥಿಗಳ / ಶಿಕ್ಷಕರ/ಇತರ ನೌಕರರ ಹಿತಾಸಕ್ತಿಯ ದೃಷ್ಟಿಯಿಂದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ಹೊರಡಿಸುವ ಶಾಸನಗಳು /ನಿಯಮಗಳು / ಅಧಿನಿಯಮಗಳು ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು ಯಾವುದೇ ಸಂದರ್ಭಗಳಲ್ಲಿ ಅರ್ಹತಾ ಮಾನದಂಡವನ್ನು ಉಲ್ಲಂಘಿಸತಕ್ಕದ್ದಲ್ಲ ಅಥವಾ ವಿಶ್ವವಿದ್ಯಾಲಯವು ಸಂಯೋಜನಾ ಆದೇಶದಲ್ಲಿ ನಿಗದಿಪಡಿಸುವ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯನ್ನು ಮೀರತಕ್ಕದ್ದಲ್ಲ ಮತ್ತು ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
8. The Sexual Harassment of Women at Workplace (Prevention, Prohibition and Redressal) Act, 2013 ರನ್ವಯ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು. ಮತ್ತು ಆ ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು. ಮುಂದುವರೆದು, ಕಾಲೇಜು / ಆಡಳಿತ ಮಂಡಳಿಯು ಸದರಿ ಅಧಿನಿಯಮದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

..3

9. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು. ಕಾಲೇಜಿನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

10. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ / ವರ್ಗಾವಣೆ ಪ್ರಮಾಣ ಪತ್ರ ಮತ್ತು ಇತರೆ ದಾಖಲಾತಿಗಳನ್ನು ಅನಾವಶ್ಯಕವಾಗಿ ತಡೆಹಿಡಿಯತಕ್ಕದ್ದಲ್ಲ, ಹಾಗೂ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಶುಲ್ಕವನ್ನು ಹೊರತುಪಡಿಸಿ ಯಾವುದೇ ಅಧಿಕ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದಲ್ಲ.

11. ಈ ಕಾಲೇಜು ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಅನುಮೋದನೆ ಪಡೆಯುವ ಮೊದಲು ಯಾವುದೇ ಭವಿಷ್ಯದ ಅವಶ್ಯಕತೆಗಳಿಗೆ ಹಾಗೂ ಕಾಲೇಜಿನ ಅಭಿವೃದ್ಧಿಗಾಗಿ ಬ್ಯಾಂಕ್ ಖಾತೆಯಲ್ಲಿ ಹತ್ತು ಲಕ್ಷ ರೂಪಾಯಿಗಳ ಕನಿಷ್ಟ ಬಂಡವಾಳ ನಿಧಿಯನ್ನು ಹೊಂದಿರತಕ್ಕದ್ದು. ಈ ಖಾತೆಯನ್ನು ಕಾಲೇಜಿನ ಪ್ರಾಂಶುಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಸಚಿವರು ಅಥವಾ ಅವರ ಅಧಿಕೃತ ಏಜೆಂಟ್ ಜಂಟಿಯಾಗಿ ನಿರ್ವಹಿಸಬೇಕು.

12. ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ ) ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13. ಕಾಲೇಜಿನಲ್ಲಿ ಉಲ್ಬಣವಾಗುವ ರ್‍ಯಾಗಿಂಗ್ ಪಿಡುಗನ್ನು ತಪ್ಪಿಸಲು ಮಾನ್ಯ ಸರ್ವೋಚ್ಚ ನ್ಯಾಯಾಲಯ, ವಿಶ್ವವಿದ್ಯಾಲಯ ಅನುದಾನ ಆಯೋಗ, ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಕರ್ನಾಟಕ ಸರ್ಕಾರ ಹಾಗೂ ಇತರರು ಹೊರಡಿಸುವ ಎಲ್ಲಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು.

ಈ ಪತ್ರವು ಸ್ವೀಕೃತವಾದ ಎಂಟು ದಿನಗಳೊಳಗಾಗಿ ಮೇಲೆ ತಿಳಿಸಿದ ಷರತ್ತುಗಳನ್ನು ಉಲ್ಲೇಖಿಸಿ ಅಗತ್ಯ ಅಧಿಸೂಚನೆಯನ್ನು ಹೊರಡಿಸುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ

(ಕೆ. ವೆಂಕಟೇಶಪ್ಪ)
ಸರ್ಕಾರದ ಉಪ ಕಾರ್ಯದರ್ಶಿ
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ
ಇಲಾಖೆ (ಅಂರಾಜವಿ ಮತ್ತು ಮಾಹ)

ಪ್ರತಿ:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ, ಬೆಂಗಳೂರು.
2. Principal, Vydehi Institute of Law, #82 EPIP Area, Nallurahalli, Whitefield, Bengaluru-560066.